# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 588 |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 11-03-2025 |

*****

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯ ಸರ್ಕಾರದ ವತಿಯಿಂದ ಕರ್ನಾಟಕದಲ್ಲಿ ಕ್ರಿಯಾತ್ಮಕ ಮತ್ತು ಬೆಳವಣಿಗೆ ಆಧಾರಿತ ಜವಳಿ ವಲಯವನ್ನು ಬಲಪಡಿಸಲು ಮತ್ತು ಅಭಿವೃದ್ಧಿಪಡಿಸಲು ಈ ಹಿಂದೆ "ಸುವರ್ಣ ವಸ್ತ್ರನೀತಿ" ಜಾರಿಗೊಳಿಸಿದ್ದು, ಈ ನೀತಿಯು 2024-25 ನೇ ಸಾಲಿನಲ್ಲೂ ಅಸ್ತಿತ್ವದಲ್ಲಿದೆಯೇ; | ಜವಳಿ ಉದ್ದಿಮೆದಾರರನ್ನು ಉತ್ತೇಜಿಸಲು ಹಾಗೂ ಉದ್ಯೋಗ ಅವಕಾಶ ಕಲ್ಪಿಸಲು ಸುವರ್ಣ ನೀತಿ ವಸ್ತ್ರ 2008-13 ಅನ್ನು ಜಾರಿಗೊಳಿಸಲಾಗಿದ್ದು, 30ನೇ ಅಕ್ಟೋಬರ್ 2013ಕ್ಕೆ ಮುಕ್ತಾಯಗೊಂಡಿರುತ್ತದೆ.<br><br>ನಂತರ 31 ನೇ ಅಕ್ಟೋಬರ್ 2013 ರಿಂದ ಜಾರಿಗೆ ಬರುವಂತೆ ನೂತನ ಜವಳಿ ನೀತಿ 2013-18 ಅನ್ನು ಜಾರಿಗೊಳಿಸಲಾಗಿದ್ದು, 03 ನೇ ನವೆಂಬರ್ 2019 ಕ್ಕೆ ಮುಕ್ತಾಯಗೊಂಡಿರುತ್ತದೆ.<br><br>ನಂತರ 04 ನೇ ನವೆಂಬರ್ 2019 ರಿಂದ ಜಾರಿಗೆ ಬರುವಂತೆ ನೂತನ ಜವಳಿ ಮತ್ತು ಸಿದ್ಧ ಉಡುಪು ನೀತಿ 2019-24 ಅನ್ನು ಜಾರಿಗೊಳಿಸಲಾಗಿದ್ದು, ಈ ನೀತಿ ಪ್ರಸ್ತುತ ಚಾಲ್ತಿಯಲ್ಲಿರುತ್ತದೆ.<br><br>ಮುಂದುವರೆದು, 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-328 ರಲ್ಲಿ ರಾಜ್ಯದಲ್ಲಿ ಜವಳಿ ಹಾಗೂ ನೇಕಾರಿಕೆ ಅಭಿವೃದ್ಧಿ, ಬಂಡವಾಳ ಹೂಡಿಕೆ ಹಾಗೂ ಉದ್ಯೋಗ ಸೃಜಿಸಲು 2024-25ರ ಅವಧಿಗೆ ರೂ.10,000 ಕೋಟಿಗಳ ಬಂಡವಾಳ ಹೂಡಿಕೆ ಹಾಗೂ 2 ಲಕ್ಷ ಉದ್ಯೋಗಗಳ ಸೃಜನೆಯ ಗುರಿಯೊಂದಿಗೆ ಹೊಸ ಜವಳಿ ನೀತಿಯನ್ನು ಜಾರಿಗೊಳಿಸಲಾಗುವುದು ಎಂದು ಘೋಷಣೆಯಾಗಿರುತ್ತದೆ.<br><br>2025-26ನೇ ಸಾಲಿನ ಆಯವ್ಯಯದ ಕಂಡಿಕೆ-352 ರಲ್ಲಿ "ರಾಜ್ಯದಲ್ಲಿ ಜವಳಿ ಹಾಗೂ ಸಿದ್ಧ ಉಡುಪು ಕ್ಷೇತ್ರದಲ್ಲಿ ಹೆಚ್ಚಿನ ಬಂಡವಾಳ ಆಕರ್ಷಿಸಿ ಸುಮಾರು ಎರಡು ಲಕ್ಷ ಉದ್ಯೋಗ ಸೃಜಿಸುವ ಉದ್ದೇಶದಿಂದ ನೂತನ 'ಜವಳಿ ನೀತಿ 2025-30' ನ್ನು ರೂಪಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| (ಆ) | ಸರ್ಕಾರದ ವತಿಯಿಂದ ಈ ಹಿಂದೆ ಮೈಸೂರು, ಹಾಸನ, ತುಮಕೂರು, ಕೋಲಾರ, ಚಿತ್ರದುರ್ಗ, ಮಂಡ್ಯ, ಬಳ್ಳಾರಿ, ಚಿಕ್ಕಬಳ್ಳಾಪುರ, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ಬಾಗಲಕೋಟೆ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಜವಳಿ ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಿದ್ದು ನಿಜವೇ; | ಮೈಸೂರು, ಹಾಸನ, ತುಮಕೂರು, ಕೋಲಾರ, ಚಿತ್ರದುರ್ಗ, ಮಂಡ್ಯ, ಬಳ್ಳಾರಿ, ಚಿಕ್ಕಬಳ್ಳಾಪುರ, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ಬಾಗಲಕೋಟೆ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಜವಳಿ ಘಟಕಗಳನ್ನು ಸರ್ಕಾರದ ವತಿಯಿಂದ ಸ್ಥಾಪಿಸುವ ಪ್ರಸ್ತಾವನೆ ಇರುವುದಿಲ್ಲ. |

...2

| | | |
|---|---|---|
| (ಇ) | ಇದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಜವಳಿ ಘಟಕಗಳನ್ನು ಸ್ಥಾಪಿಸಲಾಗಿದೆ ಮತ್ತು ಇದರಿಂದ ಎಷ್ಟು ಉದ್ಯೋಗಗಳು ಸೃಷ್ಟಿಯಾಗಿವೆ; | ಅನ್ವಯಿಸುವುದಿಲ್ಲ. |
| (ಈ) | ಇಲ್ಲವಾದಲ್ಲಿ, ಪ್ರಸ್ತಾಪಿತ ಜಿಲ್ಲೆಗಳಲ್ಲಿ ಜವಳಿ ಘಟಕಗಳನ್ನು ಸ್ಥಾಪಿಸಲು ಉಂಟಾಗುತ್ತಿರುವ ತೊಂದರೆಗಳೇನು? (ಮಾಹಿತಿ ನೀಡುವುದು) | ಸರ್ಕಾರದ ವತಿಯಿಂದ ಜವಳಿ ಘಟಕಗಳನ್ನು ಸ್ಥಾಪಿಸುವ ಉದ್ದೇಶವಿರುವುದಿಲ್ಲ. ಉದ್ದಿಮೆದಾರರು ಜವಳಿ ಘಟಕಗಳನ್ನು ಸ್ಥಾಪಿಸಿದ್ದಲ್ಲಿ ಜವಳಿ ನೀತಿಯಡಿ ಸಹಾಯಧನವನ್ನು ಒದಗಿಸಲು ಅವಕಾಶವಿರುತ್ತದೆ. |

**ಸಂಖ್ಯೆ: CI 33 JAKE 2025**

(ಶಿವಾನಂದ ಎಸ್. ಪಾಟೀಲ)

ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು